# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 175 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 25–01–2024 ಗುರುವಾರ | ಪುಟ: 4 | ಬೆಲೆ : ರೂ.2–00

Volume - 01 Issue - 175 | Title- Code: KARKAN 28269 | Chitradurga | Date: 25-01-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಅಸ್ಸಾಂನಲ್ಲಿ ರಾಹುಲ್ ನ್ಯಾಯಯಾತ್ರೆ ಮೇಲೆ ಕಲ್ಲು ತೂರಾಟದ ವಿರುದ್ಧ ಪ್ರತಿಭಟನೆ 2

ಕೇತೇ ದೇವರ ಜಾತ್ರೆ: ಕ್ಷಣಾರ್ಧದಲ್ಲಿ ಬಾರೆ ಕಳ್ಳೆ ಗುಡಿ ನಿರ್ಮಾಣ 3

ಪ್ರತಿಯೊಂದು ರಂಗದಲ್ಲೂ ಹೆಣ್ಣು ಮಕ್ಕಳ ಸಾಧನೆ ಅಪಾರ: ಶಾಸಕ ಕೆ.ಎಸ್.ನವೀನ್ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಪ್ರಯತ್ನ ಹಣೆಬರಹಕ್ಕಿಂತ ದೊಡ್ಡದು. ಪ್ರಯತ್ನ ಎಂಬ ಪದ ಚಿಕ್ಕದಿರಬಹುದು, ಆದರೆ ಅದರ ಫಲಿತಾಂಶ ಅಮೋಘ ಮತ್ತು ಅಪಾರ..........

» ಶುಭೋದಯ

## ಫೆ.8 ರಂದು ವಿಧಾನಸೌಧದ ಮುಂಭಾಗದಲ್ಲಿ
# ಸಿಎಂರಿಂದ ರಾಜ್ಯಮಟ್ಟದ ಜನಸ್ಪಂದನ

» ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫೆಬ್ರುವರಿ 8 ರಂದು ವಿಧಾನಸೌಧದ ಮುಂಭಾಗದಲ್ಲಿ ರಾಜ್ಯಮಟ್ಟದ ಜನಸ್ಪಂದನ ಕಾರ್ಯಕ್ರಮವನ್ನು ನಡೆಸಲಿದ್ದು, ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ, ಸ್ಥಳದಲ್ಲಿಯೇ ಪರಿಹಾರ ಸೂಚಿಸಲಿದ್ದಾರೆ.

ಇದಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್ ಅವರು ಇಂದು ಪೂರ್ವಸಿದ್ಧತಾ ಸಭೆ ನಡೆಸಿ, ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿದರು ಅಗತ್ಯ ಸಲಹೆ ಮತ್ತು ಸೂಚನೆಗಳನ್ನು ನೀಡಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಜನಸ್ಪಂದನ ಕಾರ್ಯಕ್ರಮವನ್ನು ಅತ್ಯಂತ ವ್ಯವಸ್ಥಿತವಾಗಿ ಆಯೋಜಿಸಬೇಕು. ಮುಖ್ಯಮಂತ್ರಿಯವರು ನಡೆಸುತ್ತಿರುವ ಎರಡನೇ ಜನಸ್ಪಂದನ ಕಾರ್ಯಕ್ರಮ ಇದಾಗಿದ್ದು, ಎಲ್ಲ ಇಲಾಖೆಗಳ ಕಾರ್ಯದರ್ಶಿಗಳು, ಇಲಾಖಾ ಮುಖ್ಯಸ್ಥರು ಹಾಜರಿದ್ದು, ವಿಶೇಷ ಆಸಕ್ತಿ ವಹಿಸಿ ಕುಂದು ಕೊರತೆ ನಿವಾರಣೆಗೆ ಕ್ರಮ ವಹಿಸಬೇಕೆಂದು ತಿಳಿಸಿದರು.




ಜನಸ್ಪಂದನ ಕಾರ್ಯಕ್ರಮಕ್ಕೆ ಆಗಮಿಸುವ ವಿಶೇಷಚೇತನರು, ಹಿರಿಯನಾಗರಿಕರಿಗೆ ವಿಶೇಷ ವ್ಯವಸ್ಥೆಗಳನ್ನು ಮಾಡುವಂತೆ ಸೂಚಿಸಿದರು.

ಸ್ವಚ್ಛತೆ, ಕುಡಿಯುವ ನೀರು, ಲಘು ಉಪಾಹಾರ, ಊಟದ ವ್ಯವಸ್ಥೆಗಳನ್ನು ಮಾಡುವ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಕಳೆದ ಬಾರಿಯ ಜನಸ್ಪಂದನದಲ್ಲಿ ಸ್ವೀಕರಿಸಿದ ಅರ್ಜಿಗಳ ತ್ವರಿತ ವಿಲೇವಾರಿ ಮಾಡುವ ಬಗ್ಗೆ ಎಲ್ಲ ಇಲಾಖೆಗಳಿಗೆ ಪತ್ರ ಬರೆಯುವುದಾಗಿ ತಿಳಿಸಿದ ಅವರು ಕೆಡಿಪಿ ಸಭೆಯಲ್ಲಿಯೂ ಜನಸ್ಪಂದನ ಅರ್ಜಿ ವಿಲೇವಾರಿ ಪ್ರಗತಿ ಪರಿಶೀಲನೆ ನಡೆಸುವಂತೆ ಮುಖ್ಯ ಕಾರ್ಯದರ್ಶಿಗಳಿಗೆ ಮನವಿ ಮಾಡಲಾಗುವುದು ಎಂದು ತಿಳಿಸಿದರು.

ಜನಸ್ಪಂದನಕ್ಕೆ ಆಗಮಿಸುವ ಜನರ ಅನುಕೂಲಕ್ಕಾಗಿ ಮೆಜೆಸ್ಟಿಕ್ ಬಸ್ ನಿಲ್ದಾಣ ಹಾಗೂ ರೈಲ್ವೆ ನಿಲ್ದಾಣಕ್ಕೆ ಉಚಿತ ಬಸ್ ವ್ಯವಸ್ಥೆ ಮಾಡಲು ಸೂಚಿಸಿದರು.

ವಿವಿಧ ಇಲಾಖೆಗಳ ಅರ್ಜಿ ಸ್ವೀಕಾರಕ್ಕೆ ಪ್ರತ್ಯೇಕ ಕೌಂಟರುಗಳನ್ನು ಸ್ಥಾಪಿಸಿ, ಅದಕ್ಕೆ ಅಗತ್ಯವಿರುವ ಎಲ್ಲ ಉಪಕರಣಗಳನ್ನೂ ಒದಗಿಸಲು ಹಾಗೂ ಸಿಬ್ಬಂದಿಯನ್ನೂ ನಿಯೋಜಿಸಲು ಇ–ಆಡಳಿತ ಇಲಾಖೆಗೆ ಸೂಚಿಸಿದರು.

ಮನವಿದಾರರ ದೂರುಗಳನ್ನು ಪರಿಶೀಲಿಸಿ, ನಿಗದಿತ ಕೌಂಟರುಗಳಿಗೆ ತೆರಳಲು ಸೂಕ್ತ ಮಾರ್ಗದರ್ಶನ ನೀಡಲು ಪ್ರವೇಶ ದ್ವಾರದಲ್ಲಿಯೇ ಅಧಿಕಾರಿ, ಸಿಬ್ಬಂದಿಗಳ ಫೆಸಿಲಿಟೇಷನ್ ತಂಡವನ್ನು ನಿಯೋಜಿಸುವಂತೆ ನಿರ್ದೇಶನ ನೀಡಿದರು.

ಅಂದಿನ ದಿನ ವಿಧಾನಸೌಧದಲ್ಲಿ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಲು ಹಾಗೂ ಸಂಚಾರ ನಿರ್ವಹಣೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಕ್ರಮ ಕೈಗೊಳ್ಳಲು ಪೊಲೀಸ್ ಇಲಾಖೆಗೆ ತಿಳಿಸಿದರು. ಸಭೆಯಲ್ಲಿ ಮುಖ್ಯಮಂತ್ರಿಯವರ ಕಾರ್ಯದರ್ಶಿ ಡಾ. ಕೆ.ವಿ. ತ್ರಿಲೋಕಚಂದ್ರ, ಇ–ಆಡಳಿತ ಇಲಾಖೆ ಕಾರ್ಯದರ್ಶಿ ಉಜ್ವಲ್ ಕುಮಾರ್ ಘೋಷ್, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಕಾರ್ಯದರ್ಶಿ ಅಜಯ್ ನಾಗಭೂಷಣ್ ಮತ್ತು ವಿವಿಧ ಇಲಾಖೆಗಳ ಇತರ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಮೊಳಕಾಲ್ಮುರು ನೂತನ ತಹಶೀಲ್ದಾರ್ ಆಗಿ ಟಿ.ಜಗದೀಶ್ ನೇಮಕ

» ಚಿತ್ರದುರ್ಗ



ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮುರು ತಾಲೂಕಿನ ತಹಶೀಲ್ದಾರ್ ಗ್ರೇಡ್ –1 ಹುದ್ದೆಗೆ ಕೂಡ್ಲಿಗಿ ತಹಶೀಲ್ದಾರ್ ಆಗಿ ಸೇವೆ ಸಲ್ಲಿಸಿ ನಂತರ ಸ್ಥಳ ನಿರೀಕ್ಷಣೆಯಲ್ಲಿದ್ದ ಟಿ. ಜಗದೀಶ್ ಅವರನ್ನು ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ಮೊಳಕಾಲ್ಮುರು ತಾಲೂಕಿನ ತಹಶೀಲ್ದಾರ್ ಗ್ರೇಡ್–1 ಮೊಳಕಾಲೂರು ತಾಲ್ಲೂಕು ತಹಶೀಲ್ದಾರ್ ರೂಪ. ಎಂ.ವಿ ಇವರು ಕಳೆದ ಒಂದು ವರ್ಷಗಳಿಂದ ಮೊಳಕಾಲ್ಮುರು ತಹಶೀಲ್ದಾರ್ ಆಗಿ ಕಾರ್ಯ ನಿರ್ವಹಿಸುತ್ತಿದ್ದರು.ಇವರ ಜಾಗಕ್ಕೆ ನೂತನ ತಹಶೀಲ್ದಾರ್ ಆಗಿ ಟಿ.ಜಗದೀಶ್ ಅವರನ್ನು ನೇಮಕ ಮಾಡಿದ್ದು ರೂಪ ಅವರಿಗೆ ಸರ್ಕಾರ ಯಾವುದೇ ಸ್ಥಳ ನಿಯೋಜನೆ ಮಾಡಿಲಾಗಿಲ್ಲ.

### 28ರಂದು ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಲಿಖಿತ ಪರೀಕ್ಷೆ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಸಿಎಆರ್/ಡಿಎಆರ್) (ಪುರುಷ & ತೃತೀಯ ಲಿಂಗ ಪುರುಷ)–3064 ಹುದ್ದೆಗಳಿಗೆ ಲಿಖಿತ ಪರೀಕ್ಷೆಯನ್ನು ಇದೇ ಜನವರಿ 28ರಂದು ಬೆಳಗ್ಗೆ 11 ರಿಂದ 12.30 ರವರೆಗೆ ರಾಜ್ಯಾದ್ಯಂತ ನಡೆಸಲಾಗುವುದು. ಲಿಖಿತ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಕಡ್ಡಾಯವಾಗಿ ವಸ್ತಸಂಹಿತೆ ಪಾಲಿಸಬೇಕು. ವಸ್ತಸಂಹಿತೆ: ಪುರುಷ ಮತ್ತು ತೃತೀಯ ಲಿಂಗ ಪುರುಷ ಅಭ್ಯರ್ಥಿಗಳು ಅರ್ಧ ತೋಳಿನ ಶರ್ಟ್‌ಗಳನ್ನು ಕಡ್ಡಾಯವಾಗಿ ಧರಿಸುವುದು ಹಾಗೂ ಸಾಧ್ಯವಾದಷ್ಟು ಕಾಲರ್ ರಹಿತ ಶರ್ಟ್‌ಗಳನ್ನು ಧರಿಸುವುದು, ಜಿಪ್ ಪ್ಯಾಕೆಟ್‌ಗಳು, ದೊಡ್ಡ ಬಟನ್‌ಗಳು ಇರುವ ಶರ್ಟ್‌ಗಳನ್ನು ಧರಿಸತಕ್ಕದ್ದಲ್ಲ. ಜೀನ್ಸ್ ಪ್ಯಾಂಟ್ ಮತ್ತು ಹೆಚ್ಚಿನ ಜೇಬುಗಳಿರುವ ಪ್ಯಾಂಟ್‌ಗಳನ್ನು ಧರಿಸತಕ್ಕದ್ದಲ್ಲ. ಪರೀಕ್ಷಾ ಕೇಂದ್ರದೊಳಗೆ ಷೂಗಳನ್ನು ನಿಷೇಧಿಸಲಾಗಿದ್ದು, ಅಭ್ಯರ್ಥಿಗಳು ತೆಳುವಾದ ಅಡಿಭಾಗವಿರುವ ಪಾದರಕ್ಷೆಗಳನ್ನು (ಚಪ್ಪಲಿ) ಧರಿಸುವುದು. ಕುತ್ತಿಗೆ ಸುತ್ತಾ ಯಾವುದೇ ಲೋಹದ ಅಭರಣಗಳು ಅಥವಾ ಉಂಗುರ ಮತ್ತು ಕಡಗಳನ್ನು ಧರಿಸುವುದು ನಿಷೇಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

### ಜ.26ರಂದು "ಸಮಾನತೆಯ ಕಡೆಗೆ" ಚಲನಚಿತ್ರ ಪ್ರಸಾರ

» ಚಿತ್ರದುರ್ಗ

ಅಸ್ಪೃಶ್ಯತೆ ನಿವಾರಣೆ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಸಲುವಾಗಿ "ಸಮಾನತೆಯ ಕಡೆಗೆ" ಎಂಬ ಕನ್ನಡ ಚಲನಚಿತ್ರವನ್ನು ಸಮಾಜ ಕಲ್ಯಾಣ ಇಲಾಖಾ ವತಿಯಿಂದ ಪ್ರಾಯೋಜನೆ ಮಾಡಿ ದೂರದರ್ಶನದ ಚಂದನ ವಾಹಿನಿಯಲ್ಲಿ ಇದೇ ಜ.26 ರಂದು ಗಣರಾಜ್ಯೋತ್ಸವ ದಿನದಂದು ಮಧ್ಯಾಹ್ನ 2.30 ರಿಂದ 4.30 ರವರೆಗೆ ಪ್ರಸಾರ ಮಾಡಲಾಗುವುದು. ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಈ ಚಲನಚಿತ್ರವನ್ನು ವೀಕ್ಷಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.


## ಕೆಎಸ್‌ಆರ್‌ಟಿಸಿ–ನೀರಿನ ಟ್ಯಾಂಕರ್ ನಡುವೆ ಡಿಕ್ಕಿ
## 20ಕ್ಕೂ ಹೆಚ್ಚು ಜನ ಗಾಯಾಳು: ಜಿಲ್ಲಾ ಆಸ್ಪತ್ರೆಗೆ ದಾಖಲು

» ಚಳ್ಳಕೆರೆ

ಬೆಂಗಳೂರು–ಬೀದರ್ ರಾಷ್ಟ್ರೀಯ ಹೆದ್ದಾರಿ 150(ಎ)ಯ ಬಿ.ಜಿ.ಕೆರೆ ಬಳಿ ನಡೆದ ಕೆಎಸ್‌ಆರ್‌ಟಿಸಿ ಮತ್ತು ನೀರಿನ ಟ್ಯಾಂಕರ್ ನಡುವೆ ಡಿಕ್ಕಿ ಸಂಭವಿಸಿ 20ಕ್ಕೂ ಹೆಚ್ಚು ಜನರು ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ನೀಡಿ, ಹೆಚ್ಚಿನ ಚಿಕಿತ್ಸೆಗೆ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಬುಧವಾರ ಮಧ್ಯಾಹ್ನ ಸುಮಾರು 3.30ರ ಸಮಯದಲ್ಲಿ ಕುಷ್ಠಗಿಯಿಂದ ಬೆಂಗಳೂರಿಗೆ ಚಲಿಸುತ್ತಿದ್ದ ಬಸ್ ಬಿ.ಜಿ.ಕೆರೆ ಬಳಿ ರಸ್ತೆಬದಿ ಗಿಡಗಳಿಗೆ ನೀರು ಹಾಕುತ್ತಿದ್ದ ನೀರಿನ ಟ್ಯಾಂಕರ್‌ಗೆ ಹಿಂಬದಿಯಿಂದ ಡಿಕ್ಕಿ ಪಡಿಸಿದ ಪರಿಣಾಮ ನೀರಿನ ಟ್ಯಾಂಕರ್ ಪಲ್ಟಿಯಾಗಿದೆ. ಬಸ್‌ನಲ್ಲಿದ್ದ ಸುಮಾರು 20ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡು ಬಹುತೇಕರಿಗೆ ಕೈ,ಕಾಲು ಮತ್ತು ಎದೆಗೆ ಪೆಟ್ಟುಬಿದಿದೆ.

ಕೆಎಸ್‌ಆರ್‌ಟಿಸಿ ಬಸ್ ಚಾಲಕ ಪರಶುರಾಮ್(35) ಡಿಕ್ಕಿ ರಭಸಕ್ಕೆ ಬಲಗಾಲಿಗೆ ಪೆಟ್ಟಾಗಿದ್ದು, ಇಲ್ಲಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ನಂತರ ಎಚ್ಚರಗೊಂಡಿದ್ದಾನೆ. ಕೂಡಲೇ ಆತನನ್ನು ಸೇರಿ



ಸುಮಾರು 15ಕ್ಕೂ ಹೆಚ್ಚು ಜನರನ್ನು ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಯಿತು. ಶಿಕ್ಷಕಿ ಸವಿತಾ(38), ಚಂದ್ರಶೇಖರ್(73), ತಿಲೋತಮೆ(71), ಶಾಂತಮ್ಮ(55), ಲಲಿತಕುಮಾರಿ(60), ಲಕ್ಷ್ಮಿ(38), ಸುಭದ್ರಮ್ಮ(38), ಮಂಜುಶ್ರೀ(33), ಈಶ್ವರಪ್ಪ(65), ನೇತ್ರಾವತಿ(43), ಧನ್ಯಶ್ರೀ(7), ಅಮೃತ(33), ನೀಲಮ್ಮ(45), ರಘು(24), ಯಶೋಧಮ್ಮ(47), ಇಬ್ರಾಮ್(22), ಸೈಯಾದ್ ಇಮಾಮ್(21) ಸಣ್ಣಮರಿಸ್ವಾಮಿ(35), ನಾಗರಾಜ(60), ಕರಿಯಮ್ಮ(70) ಗಾಯಗೊಂಡವರಾಗಿರುತ್ತಾರೆ.

## ಜ.26 ರಿಂದ ಸಂವಿಧಾನ ಸ್ತಬ್ಧ ಚಿತ್ರ ಮೆರವಣಿಗೆ

» ಚಿತ್ರದುರ್ಗ

ಭಾರತ ಸಂವಿಧಾನ ದಿನಾಚರಣೆಯ ಪ್ರಯುಕ್ತ ಸಂವಿಧಾನ ಜಾಗೃತಿ ಜಾಥಾ ಹಾಗೂ ಸಂವಿಧಾನ ಪೀಠಿಕೆಯ ಸ್ತಬ್ಧಚಿತ್ರ ಮೆರವಣಿಗೆಯು ಇದೇ ಜನವರಿ 26 ರಂದು ಪ್ರಾರಂಭವಾಗಿ ಫೆಬ್ರುವರಿ 23 ರವರೆಗೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಪ್ರದೇಶಗಳಲ್ಲಿ ಸಂಚರಿಸಲಿದೆ.

ಸಂವಿಧಾನ ಜಾಗೃತಿ ಜಾಥಾ ಹಾಗೂ ಸ್ತಬ್ಧಚಿತ್ರ ಮೆರವಣಿಗೆಯಲ್ಲಿ ಅಧಿಕಾರಿ, ಸಿಬ್ಬಂದಿಗಳು, ಚುನಾಯಿತ ಜನಪ್ರತಿನಿಧಿಗಳು, ವಿವಿಧ ಸಂಘ ಸಂಸ್ಥೆಗಳ ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಕೋರಿದ್ದಾರೆ.

ಸ್ತಬ್ಧಚಿತ್ರ ಸಂಚರಿಸುವ ಮಾರ್ಗದ ವಿವರ ಇಂತಿದೆ. ಜನವರಿ 26ರಂದು ಚಿತ್ರದುರ್ಗ ತಾಲ್ಲೂಕು ವ್ಯಾಪ್ತಿಯ ಚಿತ್ರದುರ್ಗ ನಗರಸಭೆ, ಮದಕರಿಪುರ, ಜಂಪಯ್ಯನಕೋಟೆ, ಡಿ.ಎಸ್.ಹಳ್ಳಿ, ಇಂಗಳದಾಳ್ ಗ್ರಾಮಗಳಲ್ಲಿ ಸಂಚರಿಸಲಿದೆ. ಜ.27ರಂದು ಜಾನುಕೊಂಡ, ಗೊಡಬನಾಳ್, ಸೊಂಡೇಕೊಳ, ಅನ್ನೇಹಾಳ್, ಹುಲ್ಲೂರು, ಹಿರೇಗುಂಟನೂರು, ಭೀಮಸಮುದ್ರ ಗ್ರಾಮದಲ್ಲಿ ಜಾಥಾ ಸಂಚರಿಸಲಿದೆ. ಜ.28ರಂದು ಬೊಮ್ಮೆನಹಳ್ಳಿ, ಆಲಘಟ್ಟ, ಸಿರಿಗೆರೆ, ಅಳಗವಾಡಿ, ಕೊಳಹಾಳ್, ಭರಮಸಾಗರ, ಕೋಗುಂಡೆ ಗ್ರಾಮಗಳಲ್ಲಿ ಸಂಚರಿಸಲಿದೆ.


ಪುಟ ↘ 3


## ಪ್ರಮುಖ ಸುದ್ದಿ

### ಕ್ಷೇತ್ರದ ಪ್ರಸ್ತುತ ವರ್ಷದ ಮೊದಲ ಗೋಶಾಲೆ ಚೌಳೂರಿನಲ್ಲಿ ಉದ್ಘಾಟನೆ
# ಜಾನುವಾರುಗಳ ಸಂರಕ್ಷಣೆಗೆ ಸರ್ಕಾರ ಬದ್ಧ: ಶಾಸಕ

» ಚಳ್ಳಕೆರೆ, ಪರಶುರಾಮಪುರ

ರಾಜ್ಯ ಸರ್ಕಾರ ಬರಗಾಲ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಎಲ್ಲಾ ಅಗತ್ಯಕ್ರಮಗಳನ್ನು ಜಾರಿಗೊಳಿಸುವಲ್ಲಿ ಯಶಸ್ವಿಯಾಗಿದೆ. ಸಾರ್ವಜನಿಕರಿಗೆ ಎಲ್ಲೂ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಎಚ್ಚರಿಕೆ ವಹಿಸಲಾಗಿದೆಯಲ್ಲದೆ, ಜಾನುವಾರುಗಳ ರಕ್ಷಣೆಗೂ ಸಹ ಗೋಶಾಲೆ ಆರಂಭಿಸುವ ಮೂಲಕ ರೈತರ ಬದುಕಿಗೆ ನೆಮ್ಮದಿ ತಂದಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಬುಧವಾರ ಪರಶುರಾಮಪುರ ಹೋಬಳಿಯ ಚೌಳೂರು ಗ್ರಾಮದಲ್ಲಿ ಗೋಶಾಲೆಯನ್ನು ಉದ್ಘಾಟಿಸಿ, ಜಾನುವಾರುಗಳಿಗೆ ಮೇವು ವಿತರಿಸಿ ಮಾತನಾಡಿದರು. ಈಗಾಗಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದ್ದು, ಪರಶುರಾಮಪುರ ಹೋಬಳಿ ವ್ಯಾಪ್ತಿಯ ಜಾನುವಾರುಗಳಿಗೆ



ಅವಕಾಶಕಲ್ಪಿಸಲಾಗಿದೆ. ಹೋಬಳಿಗೊಂದು ಗೋಶಾಲೆ ತೆರೆಯುವಂತೆ ಸೂಚನೆ ನೀಡಲಾಗಿದೆ. ಪ್ರಸ್ತುತ ವರ್ಷದಲ್ಲಿ ಇದು ಮೊದಲ ಗೋಶಾಲೆಯಾಗಿದೆ. ಜಾನುವಾರುಗಳಿಗೆ ಸಮಯಕ್ಕೆ ಮೇವು ನೀರು ವಿತರಿಸಿ ಅವುಗಳ ಆರೋಗ್ಯವನ್ನು ಎಚ್ಚರಿಕೆಯಿಂದ ನೋಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ತಹಶೀಲ್ದಾರ್ ರೇಹಾನ್‌ಪಾಷ,



ಪಶುವೈದ್ಯಾಧಿಕಾರಿ ಡಾ.ರೇವಣ್ಣ, ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಜೆ. ರಾಘವೇಂದ್ರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ಹಿರಿಯ ಮುಖಂಡ ಚನ್ನಕೇಶವ, ಕೆಡಿಪಿ ನಾಮಿನಿ ಸದಸ್ಯ ರಂಗಸ್ವಾಮಿ, ಗ್ರಾಮ ಪಂಚಾಯಿತಿ ಅಧ್ಯಕ್ಷ ಜಗಲೂರಸ್ವಾಮಿ, ರುದ್ರೇಶ್, ನಾಗಭೂಷಣ್, ಕರಿಯಣ್ಣ, ಕೃಷ್ಣಪ್ಪ, ತಿಪ್ಪೇಸ್ವಾಮಿ, ಜಯವೀರಚಾರಿ, ಬಸವರಾಜು, ಗುಜ್ಜಾರಪ್ಪ, ಹನುಮಂತಪ್ಪ ಮುಂತಾದವರು ಭಾಗವಹಿಸಿದ್ದರು.